149-B
19-72-28

# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ, ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.

## ವಿಷಯ

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಾಗೂ ವಿಶ್ವವಿದ್ಯಾಲಯಗಳಲ್ಲಿ 15, 20 ವರ್ಷಗಳಿಂದ ಅತಿಥಿ ಉಪನ್ಯಾಸಕರಾಗಿ ಸುಮಾರು 12000 ಕ್ಕೂ ಹೆಚ್ಚು ಮಂದಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸದರಿಯವರು ಬಹಳ ಕಡಿಮೆ ವೇತನದಲ್ಲಿ, ಸೇವಾ ಭದ್ರತೆ, ರಜೆ ಇನ್ನಿತರೆ ಯಾವುದೇ ಸೌಲಭ್ಯಗಳನ್ನು ನೀಡದೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಪ್ರತಿ ವರ್ಷ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳುವಾಗ ಹಲವಾರು ಗೊಂದಲಗಳಾಗುತ್ತಿದ್ದು, ಕೆಲವರಿಗೆ ಉದ್ಯೋಗವಿಲ್ಲದೆ ನಿರುದ್ಯೋಗಿಗಳಾಗಿ ಬೀದಿ ಪಾಲಾಗುತ್ತಿದ್ದಾರೆ. ಅತಿಥಿ ಉಪನ್ಯಾಸಕರಲ್ಲಿ ಹಲವರಿಗೆ ಈಗಾಗಲೇ ವಯೋಮಿತಿ ಮೀರಿದ್ದು, ಬೇರೆ ಯಾವ ಸರ್ಕಾರಿ ಕೆಲಸಕ್ಕೆ ಸೇರಲು ಆಗುತ್ತಿಲ್ಲ. ಸರ್ಕಾರವು ನೀಡುತ್ತಿರುವ ವೇತನವು ಇವರ ಜೀವನ ನಡೆಸಲು ಸಾಧ್ಯವಾಗದಂತಹ ಪರಿಸ್ಥಿತಿ ಇದೆ. ಆದ್ದರಿಂದ, ಸರ್ಕಾರಿ ಪದವಿ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ, ಕನಿಷ್ಠ ವೇತನ ಹಾಗೂ ಇನ್ನಿತರೆ ಸಮಸ್ಯೆಗಳನ್ನು ಬಗೆಹರಿಸಬೇಕೆಂಬ ಕುರಿತು.

## ಉತ್ತರ

ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 88 ಡಿಸಿಇ 2003, ದಿನಾಂಕ:18-12-2003 ರಲ್ಲಿ ಖಾಯಂ ಉಪನ್ಯಾಸಕರಿಗೆ ನಿಗದಿತ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರವನ್ನು ನಿರ್ವಹಿಸಲು, ಅರೆಕಾಲಿಕ ಉಪನ್ಯಾಸಕರ ಬದಲಿಗೆ, ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು. ಖಾಯಂ ಉಪನ್ಯಾಸಕರಿಗೆ ವಾರಕ್ಕೆ 16/20 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿದ್ದು, ಅತಿಥಿ ಉಪನ್ಯಾಸಕರಿಗೆ ಅದರಲ್ಲಿ ಅರ್ಧದಷ್ಟು ಅಂದರೆ ಗರಿಷ್ಠ 8/10 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿತ್ತು. ಅತಿಥಿ ಉಪನ್ಯಾಸಕರಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹೊಂದಿದವರಿಗೆ ರೂ.13,000/- ಹಾಗೂ ಯು.ಜಿ.ಸಿ. ವಿದ್ಯಾರ್ಹತೆ ಇಲ್ಲದವರಿಗೆ ರೂ.11,000/-ಗಳ ಗೌರವಧನವನ್ನು ನಿಗಧಿಪಡಿಸಲಾಗಿತ್ತು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರು ಸೇವಾ ಸಕ್ರಮಾತಿ, ಗೌರವಧನ ಹೆಚ್ಚಳ ಮತ್ತಿತರೆ ಬೇಡಿಕೆಗಳನ್ನು ಈಡೇರಿಸುವಂತೆ ಕೋರಿ, ದಿನಾಂಕ:10.12.2021 ರಿಂದ ಮುಷ್ಕರ ನಡೆಸಿದ್ದರು. ಈ ಹಿನ್ನೆಲೆಯಲ್ಲಿ ಅತಿಥಿ ಉಪನ್ಯಾಸಕರುಗಳ ಗೌರವಧನ ಹೆಚ್ಚಳ ಹಾಗೂ ಇತರೆ ಬೇಡಿಕೆಗಳಿಗೆ ಸಂಬಂಧಿಸಿದಂತೆ, ವಿವರವಾದ ಅಧ್ಯಯನ ನಡೆಸಿ, ವಿಸ್ತೃತ ವರದಿಯನ್ನು ಸಲ್ಲಿಸಲು ಸರ್ಕಾರವು ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿತ್ತು.

ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯು ಅತಿಥಿ ಉಪನ್ಯಾಸಕರ ವಿವಿಧ ಬೇಡಿಕೆಗಳನ್ನು ಕಾನೂನಾತ್ಮಕವಾಗಿ, ಆಡಳಿತಾತ್ಮಕವಾಗಿ ಮತ್ತು ಆರ್ಥಿಕ ಪರಿಸ್ಥಿಗೆ ಅನುಗುಣವಾಗಿ ಪರಿಶೀಲಿಸಿ, ಸರ್ಕಾರಕ್ಕೆ ವಿಸ್ತೃತ ವರದಿಯನ್ನು ಸಲ್ಲಿಸಿತ್ತು. ಸದರಿ ವರದಿಯನ್ನು ಪರಿಶೀಲಿಸಿದ ಸರ್ಕಾರವು ಹೊರಡಿಸಿದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ಮತ್ತು ತಿದ್ದುಪಡಿ ದಿನಾಂಕ:24.01.2022 ರಲ್ಲಿ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ನೀಡಲಾಗುತ್ತಿರುವ ಗರಿಷ್ಠ 8/10 ಗಂಟೆಗಳ ಬದಲಾಗಿ, ಗರಿಷ್ಠ15/19 ಗಂಟೆಗಳ ಕಾರ್ಯಭಾರವನ್ನು ನೀಡಿ, ಗೌರವಧನವನ್ನು ಈ ಕೆಳಗಿನಂತೆ ಹೆಚ್ಚಿಸಲಾಗಿದೆ.

- ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ಮಾತ್ರ)
- ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ)
- ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ)

ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ)

2021-22ನೇ ಶೈಕ್ಷಣಿಕ ಸಾಲಿನಲ್ಲಿ ಗರಿಷ್ಠ 15/19 ಗಂಟೆಗಳ ಕಾರ್ಯಭಾರ ಹಾಗೂ ಭಾಗಶಃ ಲಭ್ಯವಾಗುವ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಕೇಂದ್ರಿಕೃತ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ರಾಜ್ಯವ್ಯಾಪಿ ಮೆರಿಟ್/ಆಯ್ಕೆಪಟ್ಟಿ ಸಿದ್ಧಪಡಿಸಿ ನೇಮಿಸಿಕೊಳ್ಳಲಾಗಿತ್ತು. ಅದರಂತೆ, ಪ್ರಸಕ್ತ 2022-23ನೇ ಶೈಕ್ಷಣಿಕ ಸಾಲಿನಲ್ಲಿಯೂ ಸಹ ಗರಿಷ್ಠ 15/19 ಗಂಟೆಗಳ ಕಾರ್ಯಭಾರ ಹಾಗೂ ಭಾಗಶಃ ಲಭ್ಯವಾಗುವ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಕೇಂದ್ರಿಕೃತ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ರಾಜ್ಯವ್ಯಾಪಿ ಮೆರಿಟ್/ಆಯ್ಕೆಪಟ್ಟಿ ಸಿದ್ಧಪಡಿಸಿ ನೇಮಿಸಿಕೊಳ್ಳಲು ಕ್ರಮ ವಹಿಸಲಾಗಿದ್ದು, ಅಭ್ಯರ್ಥಿಗಳು ತಮಗೆ ಬೇಕಾಗಿರುವ ಸ್ಥಳ/ಕಾಲೇಜು ಆಯ್ಕೆ ಮಾಡಿಕೊಳ್ಳಲು ಮುಕ್ತ ಅವಕಾಶ ನೀಡಲಾಗಿದೆ. ಅದರನ್ವಯ ಆನ್‌ಲೈನ್ ಕೌನ್ಸಿಲಿಂಗ್‌ನಲ್ಲಿ ಸ್ಥಳ/ಕಾಲೇಜು ಆಯ್ಕೆ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರು ಸಂಬಂಧಪಟ್ಟ ಕಾಲೇಜುಗಳಲ್ಲಿ ಕರ್ತವ್ಯಕ್ಕೆ ಹಾಜರಾಗಿ, ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವಾ ಅನುಭವ ಹೊಂದಿರುವವರಿಗೆ ಆದ್ಯತೆ ಮೇರೆಗೆ ಪರಿಗಣಿಸಲಾಗಿದೆ. ಹೆಚ್ಚುವರಿ ಕಾರ್ಯಭಾರಕ್ಕೆ ತಾತ್ಕಾಲಿಕ ವ್ಯವಸ್ಥೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ಹಾಗೂ ಇತರೆ ಸೌಲಭ್ಯಗಳನ್ನು ನೀಡಲು ಅವಕಾಶವಿರುವುದಿಲ್ಲ.

**ವಿಶ್ವವಿದ್ಯಾಲಯ**

ಯುಜಿಸಿಯ ದಿನಾಂಕ:28-01-2019 ರಂದು ಹೊರಡಿಸಿರುವ ಮಾರ್ಗಸೂಚಿಯಲ್ಲಿ ಪ್ರತಿ ಉಪನ್ಯಾಸಕ್ಕೆ ರೂ.1500/- ರಂತೆ ಪ್ರತಿ ತಿಂಗಳಿಗೆ ಗರಿಷ್ಠ ರೂ.50,000/-ಗಳು ಮೀರದಂತೆ ಗೌರವ ಧನವನ್ನು ನಿಗದಿಪಡಿಸಿ ಹಾಗೂ ಖಾಯಂ ಪ್ರಾಧ್ಯಾಪಕರುಗಳಿಗೆ ನೀಡುವ ಪಿಂಚಣಿ, ಗ್ರಾಚ್ಯೂಟಿ, ರಜೆ ಹಾಗೂ ಇನ್ನಿತರ ಸೌಲಭ್ಯಗಳಂತೆ ಅತಿಥಿ ಉಪನ್ಯಾಸಕರುಗಳಿಗೆ ನೀಡಲು ಅವಕಾಶವಿರುವುದಿಲ್ಲವೆಂದು ತಿಳಿಸಿರುತ್ತದೆ.

ಈ ಮಾರ್ಗಸೂಚಿಯನ್ವಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಅತಿಥಿ ಉಪನ್ಯಾಸಕರುಗಳಿಗೆ ಗೌರವ ಧನವನ್ನು, ವಿದ್ಯಾರ್ಹತೆ ಹಾಗೂ ಕಾರ್ಯಭಾರಕ್ಕನುಗುಣವಾಗಿ ಪಾವತಿಸುತ್ತಿರುತ್ತವೆ. ಖಾಯಂ ಪ್ರಾಧ್ಯಾಪಕರುಗಳಿಗೆ ನೀಡುವ ಸೌಲಭ್ಯಗಳಾದ ರಜೆ ಹಾಗೂ ಇನ್ನಿತರೆ ಸೌಲಭ್ಯಗಳನ್ನು ಅತಿಥಿ ಉಪನ್ಯಾಸಕರುಗಳಿಗೆ ನೀಡಲು ಅವಕಾಶವಿರುವುದಿಲ್ಲ. ಆದಾಗ್ಯೂ, ಸಂದರ್ಭಾನುಸಾರ ಹಲವು ವಿಶ್ವವಿದ್ಯಾಲಯಗಳು 12 ಗಂಟೆಗಳ ಬೋಧನಾ ಕಾರ್ಯಭಾರವನ್ನು ನಿರ್ವಹಿಸುವ ಅತಿಥಿ ಉಪನ್ಯಾಸಕರುಗಳಿಗೆ ಮಾಹೆಯಾನ ಒಂದು ದಿವಸ ಮತ್ತು 08 ಗಂಟೆಗಳ ಬೋಧನಾ ಕಾರ್ಯಭಾರವನ್ನು ನಿರ್ವಹಿಸುವ ಅತಿಥಿ ಉಪನ್ಯಾಸಕರುಗಳಿಗೆ ಅರ್ಧ ದಿನ ಸಾಂದರ್ಭಿಕ ರಜೆಯನ್ನು ನೀಡಲಾಗುತ್ತಿದೆ.

ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆಯನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಇಡಿ 63 ಡಿಸಿಇ 2023

**(ಡಾ: ಅಶ್ವತ್ಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು